# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 519(696)
ಮಾನ್ಯ ಸದಸ್ಯರ ಹೆಸರು: ಡಾ: ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)
ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ: 22.07.2024.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 2016 ರಿಂದ ಈವರೆಗೆ ಒಟ್ಟು ಎಷ್ಟು ಪದವೀಧರ ಪ್ರಾಥಮಿಕ ಹಾಗೂ (6-8) ಜಿಪಿಟಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ; ಈ ವೃಂದದ ಶಿಕ್ಷಕರಿಗೆ ಮುಂದಿನ ಬಡ್ತಿಯ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು; | ರಾಜ್ಯಲ್ಲಿ 2016 ರಿಂದ ಈ ವರೆಗೆ ಒಟ್ಟು 22853 ಪದವೀಧರ ಪ್ರಾಥಮಿಕ ಹಾಗೂ (6-8) ಜಿಪಿಟಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ.<br><br>ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿಗೆ ಸಂಬಂಧಿಸಿದಂತೆ 2016ರ ವೃಂದ ಮತ್ತು ನೇಮಕಾತಿ ನಿಯಮಗಳು ಚಾಲ್ತಿಯಲ್ಲಿದ್ದು, ಅದರಲ್ಲಿ ಪಿ.ಎಸ್.ಟಿ ವೃಂದಕ್ಕೆ ಅರ್ಹತೆ ಮತ್ತು ಜೇಷ್ಠತೆ ಹೊಂದಿರುವ ಶಿಕ್ಷಕರಿಗೆ ಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಆದರೆ, ಜಿ.ಪಿ.ಟಿ ಶಿಕ್ಷಕರ ಬಡ್ತಿಗೆ ಸಂಬಂಧಿಸಿದಂತೆ ಯಾವುದೇ ಮಾನದಂಡಗಳು ನಿಗದಿಯಾಗಿರುವುದಿಲ್ಲ. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 6 ರಿಂದ 8ನೇ ತರಗತಿ ಪದವೀಧರ ಶಿಕ್ಷಕರಿಗೆ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಕುರಿತು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021 ಗಳಲ್ಲಿ ಶ್ರೀ ನಾರಾಯಣ ಬಾಳಪ್ಪ ಮತ್ತಿತರರು ದಾಖಲಿಸಿದ್ದ ದಾವೆಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯವು ದಿನಾಂಕ: 12.05.2021 ರಂದು ತೀರ್ಪು ನೀಡಿದ್ದು, ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ನೀಡಿರುವ ಬಡ್ತಿಗಳನ್ನು ಹಿಂಪಡೆಯಲು ಸೂಚಿಸಿರುತ್ತದೆ. ಆದ್ದರಿಂದ ಕೆ.ಎ.ಟಿ. ಅರ್ಜಿ ಸಂಖ್ಯೆ: 3343-3503/2020 ರಲ್ಲಿ ದಿನಾಂಕ:12.05.2021ರ ತೀರ್ಪು ಆದ ನಂತರ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗೆ ಬಡ್ತಿ ನೀಡುವುದನ್ನು ತಡೆಹಿಡಿಯಲು ಸೂಚಿಸಲಾಗಿದೆ.<br><br>ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:3443-3503/2020 ಮತ್ತು 857- 917/2021ಗಳ ತೀರ್ಪನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಪಿಟಿಷನ್ ಸಂಖ್ಯೆ: 16936/2021 ರಲ್ಲಿ ಮೇಲ್ಮನವಿ ಸಲ್ಲಿಸಿದ್ದು ಸದರಿ ಪ್ರಕರಣದಲ್ಲಿ ದಿನಾಂಕ: 11.07.2024 ರಂದು ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆ ನಡೆದಿದ್ದು ಸದರಿ ವಿಚಾರಣೆಯಲ್ಲಿ ಮಾನ್ಯ ನ್ಯಾಯಾಧೀಶರು ಎರಡು ವಾರದೊಳಗಾಗಿ 2016ರ ವೃಂದ ಮತ್ತು ನೇಮಕಾತಿ ನಿಯಮದ ಕರಡನ್ನು ಪ್ರಕಟಿಸಿ, ಪ್ರತಿಯನ್ನು ಮಾನ್ಯ |
| ಆ) | ರಾಜ್ಯದಲ್ಲಿ ಜಿಪಿಟಿ ಶಿಕ್ಷಕರಿಗೆ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಟ್-2 ಹುದ್ದೆಗೆ ಬಡ್ತಿ ನೀಡಲು ಅನುವಾಗುವಂತೆ ಪ್ರೌಢಶಾಲಾ ಸಹಶಿಕ್ಷಕರ ಸಿ ಅಂಡ್ ಆರ್ ರಚಿಸಲು ನ್ಯಾಯಾಲಯದಿಂದ ಸರ್ಕಾರಕ್ಕೆ ನಿರ್ದೇಶನ ಅಥವಾ ಆದೇಶ ಬಂದಿದೆಯೇ; ಈ ಕುರಿತಂತೆ ಸರ್ಕಾರ ತೆಗೆದಕೊಂಡಿರುವ ಉಪಕ್ರಮಗಳಾವುವು; | |
| ಇ) | ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವಲ್ಲಿ ಕೆ.ಎ.ಟಿ ನೀಡಿರುವ ಆದೇಶದಂತೆ ಬಡ್ತಿ ಪ್ರಕ್ರಿಯೆ ನಡೆಸಲು ಸರ್ಕಾರ ವಿಳಂಬ ಮಾಡುತ್ತಿರಲು ಕಾರಣವೇನು; ಕೂಡಲೇ ಈ ಹುದ್ದೆಗೆ ಬಡ್ತಿ ನೀಡಲು ತೆಗೆದುಕೊಂಡಿರುವ ಕ್ರಮಗಳಾವುವು? | |

| | | |
|---|---|---|
| | | ನ್ಯಾಯಾಲಯಕ್ಕೆ ಸಲ್ಲಿಸಲು ತಿಳಿಸಿರುವ ಮೇರೆಗೆ ಅದರಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ದಿನಾಂಕ: 12.07.2024 ಮತ್ತು ದಿನಾಂಕ: 20.06.2024 ರಲ್ಲಿ ಸಲ್ಲಿಸಿರುವ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತುರ್ತಾಗಿ ಅನುಮೋದಿಸುವಂತೆ ಕೋರಿದ್ದು ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.<br><br>2016ರ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ನಂತರ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶದ ನಂತರ ಪಿ.ಎಸ್.ಟಿ ಮತ್ತು ಜಿ.ಪಿ.ಟಿ ಶಿಕ್ಷಕರಿಗೆ ನಿಯಮಾನುಸಾರ ಬಡ್ತಿ ನೀಡುವ ಸಂಬಂಧ ಕ್ರಮವಹಿಸಲಾಗುವುದು. |

**ಇಪಿ 48 ಪಿಎಂಎ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು